**ಹಿರಿಯ ಸಿವಿಲ್ ನ್ಯಾಯಾಧೀಶರ ಮತ್ತು ಜೆ ಎಂ ಎಫ್ ಸಿ ರವರ ನ್ಯಾಯಾಲಯ,**
**ತಿ. ನರಸೀಪುರ**

**ಸಿ ಸಿ ಸಂಖ್ಯೆ: 114/2025**

**ದೋಷಾರೋಪಣೆ**

ಶ್ರೀ ಹನುಮಂತ ಜಿ.ಹೆಚ್. ಬಿ.ಎ.ಎಲ್., ಎಲ್‌ಎಲ್.ಎಮ್., ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ, ತಿ. ನರಸೀಪುರ ಆದ ನಾನು

1. ಖಲೀಲ್ ಉಲ್ಲಾ ಬಿನ್ ಲೇ ಬಶೀರ್ ಅಹಮದ್
   51 ವರ್ಷ.

2. ಮೊಹಮದ್ ಜಬೀವುಲ್ಲಾ ಬಿನ್ ನಸೀರ್ ಅಹಮದ್
   27 ವರ್ಷ.

   ಇಬ್ಬರ ವಾಸಃ ಗರ್ಗೇಶ್ವರಿ ಗ್ರಾಮ,
   ತಿ. ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ.

ಎಂಬ ಆರೋಪಿತರಾದ ನಿಮ್ಮ ಮೇಲೆ ಈ ಕೆಳಗಿನಂತೆ ಹೊರಿಸುವ ದೋಷಾರೋಪ ಎನೆಂದರೆ :-

ಮೊದಲನೆಯದಾಗಿ, ದಿನಾಂಕ 01.08.2024 ರಂದು ಸಂಜೆ 5.40 ಗಂಟೆ ಸಮಯದಲ್ಲಿ, ತಿ.ನರಸೀಪುರ ಪೊಲೀಸ್ ಠಾಣಾ ವ್ಯಾಪ್ತಿಯ ತಿ. ನರಸೀಪುರ ತಾಲ್ಲೂಕಿನ ಯಡದೊರೆ ಟೋಲ್ ಹತ್ತಿರ, ಟೋಲ್ ಹಣ ಕಟ್ಟುವ ವಿಚಾರದಲ್ಲಿ, ಸಮಾನ ಉದ್ದೇಶದಿಂದ, ಆರೋಪಿತರಾದ ನೀವು ಚಾಸಾ-1/ಸುರೇಶ ಸಿ ಮತ್ತು ಚಾಸಾ-2/ಗಿರೀಶ್ ಕೆ.ಎನ್. ರವರನ್ನು ಉದ್ದೇಶಿಸಿ, "ಬೋಳಿ ಮಕ್ಕಳ, ಸೂಳೇ ಮಕ್ಕಳ" ಎಂದು ಅವಾಚ್ಯ ಶಬ್ದಗಳಿಂದ ಬೈದು ಸಾರ್ವಜನಿಕ ನೆಮ್ಮದಿಗೆ ಭಂಗ ಉಂಟು ಮಾಡುವ ಮೂಲಕ

ಭಾರತೀಯ ನ್ಯಾಯಾ ಸಂಹಿತೆ ಕಲಂ 352 ಸಹ ಕಲಂ 3(5) ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದು, ಅದು ನನ್ನ ಸಂಜ್ಞೆಯಲ್ಲಿ ಬರುತ್ತದೆ.

ಎರಡನೇಯದಾಗಿ, ಮೇಲೆ ಹೇಳಿದ ದಿನ, ಸಮಯ ಮತ್ತು ಸ್ಥಳದಲ್ಲಿ, ಸಮಾನ ಉದ್ದೇಶದಿಂದ, 1ನೇ ಆರೋಪಿತರಾದ ನೀವು ಕೈಯಿಂದ ಚಾಸಾ-1 ರವರ ಎದೆಯ ಭಾಗಕ್ಕೆ ಗುದ್ದಿ, ಅವರಿಗೆ ಸಾಮಾನ್ಯ ಸ್ವರೂಪದ ನೋವುಂಟು ಮಾಡುವ ಮೂಲಕ ಭಾರತೀಯ ನ್ಯಾಯಾ ಸಂಹಿತೆ ಕಲಂ 115(2) ಸಹ ಕಲಂ 3(5)ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದು, ಅದು ನನ್ನ ಸಂಜ್ಞೆಯಲ್ಲಿ ಬರುತ್ತದೆ.

ಮೂರನೇಯದಾಗಿ, ಮೇಲೆ ಹೇಳಿದ ದಿನ, ಸಮಯ ಮತ್ತು ಸ್ಥಳದಲ್ಲಿ, ಸಮಾನ ಉದ್ದೇಶದಿಂದ, 2ನೇ ಆರೋಪಿತರಾದ ನೀವು ಕೈಯಿಂದ ಚಾಸಾ-2 ರವರ ಬೆನ್ನಿಗೆ ಹೊಡೆದು ಅವರ ಎಡಗೈನ ಉಂಗುರ ಬೆರಳನ್ನು ತಿರಿದು ಅವರಿಗೆ ತೀವ್ರ ಸ್ವರೂಪದ ಗಾಯ ಉಂಟು ಮಾಡುವ ಮೂಲಕ ಭಾರತೀಯ ನ್ಯಾಯಾ ಸಂಹಿತೆ ಕಲಂ 117(2) ಸಹ ಕಲಂ 3(5)ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದು, ಅದು ನನ್ನ ಸಂಜ್ಞೆಯಲ್ಲಿ ಬರುತ್ತದೆ.

ನಾಲ್ಕನೇಯದಾಗಿ,ಮೇಲೆ ಹೇಳಿದ ದಿನ, ಸಮಯ ಮತ್ತು ಸ್ಥಳದಲ್ಲಿ, ಸಮಾನ ಉದ್ದೇಶದಿಂದ, ಆರೋಪಿತರಾದ ನೀವು ಚಾಸಾ-1 ಮತ್ತು 2 ರವರಿಗೆ ಪ್ರಾಣ ಬೆದರಿಕೆ ಉಂಟು ಮಾಡುವ ಮೂಲಕ ಭಾರತೀಯ ನ್ಯಾಯಾ ಸಂಹಿತೆ ಕಲಂ 351(2)(3) ಸಹ ಕಲಂ 3(5)ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದು, ಅದು ನನ್ನ ಸಂಜ್ಞೆಯಲ್ಲಿ ಬರುತ್ತದೆ.

ನಾನು ಈ ಮೇಲಿನ ದೋಷಾರೋಪಣೆಗಳ ಮೇಲೆ ಈ ನ್ಯಾಯಾಲಯದ ವಿಚಾರಣೆಗೆ ನೀವು ಗುರಿಯಾಗಬೇಕೆಂದು ನಿರ್ದೇಶಿಸುತ್ತೇನೆ.

ದಿನಾಂಕ 16.08.2025

**ಹಿರಿಯ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆಎಂಎಫ್‌ಸಿ, ಟಿ ನರಸೀಪುರ**

**ಹಿರಿಯ ಸಿವಿಲ್ ನ್ಯಾಯಾಧೀಶರ ಮತ್ತು ಜೆ ಎಂ ಎಫ್ ಸಿ ರವರ ನ್ಯಾಯಾಲಯ,**

**ತಿ. ನರಸೀಪುರ**

**ಸಿ ಸಿ ಸಂಖ್ಯೆ: 114/2025**

**ದೋಷಾರೋಪಣೆ**

ಶ್ರೀ ಹನುಮಂತ ಜಿ.ಹೆಚ್. ಬಿ.ಎ.ಎಲ್., ಎಲ್‌ಎಲ್.ಎಮ್., ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ, ತಿ. ನರಸೀಪುರ ಆದ ನಾನು

1. ಖಲೀಲ್ ಉಲ್ಲಾ ಬಿನ್ ಲೇ ಬಶೀರ್ ಅಹಮದ್
   51 ವರ್ಷ.

2. ಮೊಹಮದ್ ಜಬೀವುಲ್ಲಾ ಬಿನ್ ನಸೀರ್ ಅಹಮದ್
   27 ವರ್ಷ.

   ಇಬ್ಬರ ವಾಸಃ ಗರ್ಗೇಶ್ವರಿ ಗ್ರಾಮ,
   ತಿ ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ.

ಪ್ರಶ್ನೆಃ ನಿಮ್ಮ ಮೇಲೆ ಹೊರಿಸಲಾದ ದೋಷಾರೋಪಣೆ ಕೇಳಿದ್ದೀರಾ? ಅದು ನಿಮಗೆ ತಿಳಿಯಿತೇ?

ಉತ್ತರಃ ಹೌದು

ಪ್ರಶ್ನೆಃ ನೀವು ಸದರಿ ದೋಷಾರೋಪವನ್ನು ಒಪ್ಪಿಕೊಳ್ಳುತೀರಾ? ಅಥವಾ ನಿಮ್ಮ ವಿರುದ್ಧ ವಿಚಾರಣೆ ನಡೆಯಬೇಕೇ?

ಉತ್ತರಃ ವಿಚಾರಣೆಯಾಗಬೇಕು.

(ಮೇಲಿನ ದೋಷಾರೋಪಣೆಯನ್ನು ಆಪಾದಿತರಿಗೆ ತಿಳಿದಿರುವ ಭಾಷೆಯಲ್ಲಿ ಓದಿ, ತಿಳಿಸಿ ಹೇಳಿ ಅವರು ನೀಡಿದ ಉತ್ತರವನ್ನು ಬರೆದುಕೊಂಡಿರುವುದಾಗಿ ಈ ಮೂಲಕ ದೃಢೀಕರಿಸಲಾಗಿದೆ.)

ದಿನಾಂಕಃ 16.08.2025

**ಹಿರಿಯ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆಎಂಎಫ್‌ಸಿ, ಟಿ ನರಸೀಪುರ**